# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 11.12.2025ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2025ನೇ ಸಾಲಿನ ಎಂಟನೇ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು :**

| | | |
|---|---|---|
| 1. | ಪ್ರೊ. ಪಿ.ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು |
| 2. | ಡಾ. ಕವಿತಾ ಕೆ.ಆರ್.<br>ಜಂಟಿ ನಿರ್ದೇಶಕರು (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು |
| 3. | ಪ್ರೊ. ಪುಟ್ಟಣ್ಣ<br>ಡೀನರು, ವಾಣಿಜ್ಯ ನಿಕಾಯ | ಸದಸ್ಯರು |
| 4. | ಡಾ. ಎಸ್.ಬಿ.ಎಂ. ಪ್ರಸನ್ನ | ಸದಸ್ಯರು |
| 5. | ಡಾ.ಕೆ.ಸಿ. ಮಹದೇಶ | ಸದಸ್ಯರು |
| 6. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು |
| 7. | ಪ್ರೊ. ಉದಯ ಕುಮಾರ್ ಬಿ. | ಸದಸ್ಯರು |
| 8. | ಶ್ರೀ ನಿತ್ಯಾನಂದ ವಿ. ಗಾಂವಕರ | ಸದಸ್ಯರು |
| 9. | ಶ್ರೀಮತಿ ಶೃತಿ ಶೆಟ್ಟಿ | ಸದಸ್ಯರು |
| 10. | ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ | ಸದಸ್ಯರು |
| 11. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು |
| 12. | ಶ್ರೀ ರಘುರಾಜ್ | ಸದಸ್ಯರು |
| 13. | ಶ್ರೀ ಅಚ್ಚುತ ಗಟ್ಟಿ | ಸದಸ್ಯರು |
| 14. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು |

| | | |
|---|---|---|
| 15. | ಶ್ರೀಮತಿ ಪುಷ್ಪಲತಾ ಹೆಚ್.ಕೆ.<br>ಪ್ರಾಂಶುಪಾಲರು ಮತ್ತು ಸಹ ನಿರ್ದೇಶಕರು,<br>ಸರ್ಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ,<br>**(ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಆಯುಕ್ತರ ಪರವಾಗಿ)** | ಸದಸ್ಯರು |
| 16. | ಪ್ರೊ. ಹೆಚ್. ದೇವೇಂದ್ರಪ್ಪ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 17. | ಶ್ರೀ ಪಂಚಲಿಂಗಸ್ವಾಮಿ, **ಕೆ.ಎಸ್.ಎ.ಎಸ್.,**<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ ಆಹ್ವಾನಿತರು |
| 18. | ಡಾ. ಗಣೇಶ್ ಸಂಜೀವ್<br>ಪ್ರಭಾರ ಕುಲಸಚಿವರು (ಆಡಳಿತ) | ಸದಸ್ಯ ಕಾರ್ಯದರ್ಶಿ |

**ಅನುಪಸ್ಥಿತರು:**

| | | |
|---|---|---|
| 1. | ತಾಂತ್ರಿಕ ಶಿಕ್ಷಣ ನಿರ್ದೇಶಕರು,<br>ಕರ್ನಾಟಕ ಸರ್ಕಾರ<br>ಬೆಂಗಳೂರು | ಸದಸ್ಯರು |
| 2. | ಡಾ. ಸಂದೇಶ್ ಕೆ.ಎಸ್<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು |

## ಪ್ರಾರಂಭಿಕ

**ಪ್ರಾರಂಭದಲ್ಲಿ ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರು, ಕುಲಸಚಿವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.**

**ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನು ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.**

- **ಸ್ವಾಗತ:**

ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವ (ಆಡಳಿತ) ಹುದ್ದೆಯ ಪ್ರಭಾರವನ್ನು ವಹಿಸಿಕೊಂಡು, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 17 (2) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಆಡಳಿತ) ನೆಲೆಯಲ್ಲಿ ಸಿಂಡಿಕೇಟಿನ ಸದಸ್ಯ ಕಾರ್ಯದರ್ಶಿಯಾಗಿರುವ ಡಾ. ಗಣೇಶ್ ಸಂಜೀವ್, ಹಿರಿಯ ಪ್ರಾಧ್ಯಾಪಕರು ಇವರನ್ನು ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 28(1)(ಡಿ)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಡೀನರ ನೆಲೆಯಲ್ಲಿ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಪ್ರೊ. ಪುಟ್ಟಣ್ಣ ಕೆ., ಡೀನರು, ವಾಣಿಜ್ಯ ನಿಕಾಯ ಹಾಗೂ ಪ್ರಾಧ್ಯಾಪಕರು, ವ್ಯವಹಾರ ಆಡಳಿತ ವಿಭಾಗ ಇವರುಗಳನ್ನು ಸಿಂಡಿಕೇಟ್ ಸಭೆಗೆ ಸ್ವಾಗತಿಸಲಾಯಿತು.

- **ಕೃತಜ್ಞತೆ**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 17 (2) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಆಡಳಿತ) ನೆಲೆಯಲ್ಲಿ ಸಿಂಡಿಕೇಟಿನ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್., ಇವರು ದಿನಾಂಕ 30.11.2025 ರಂದು ವಯೋನಿವೃತ್ತಿ ಹೊಂದಿರುವುದರಿಂದ ಕುಲಸಚಿವರು (ಆಡಳಿತ) ಹುದ್ದೆಯಿಂದ ಮುಕ್ತಗೊಳಿಸಲಾಗಿದೆ.

ಅಂತೆಯೇ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 28(1)(ಡಿ)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಡೀನರ ನೆಲೆಯಲ್ಲಿ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ ಪ್ರೊ. ಪರಿಣಿತ, ಡೀನರು, ಕಲಾ ನಿಕಾಯ ಹಾಗೂ ಪ್ರಾಧ್ಯಾಪಕರು, ಆಂಗ್ಲ ವಿಭಾಗ, ಮಂಗಳೂರು

ವಿಶ್ವವಿದ್ಯಾನಿಲಯ ಇವರ ಸದಸ್ಯತ್ವದ ಅವಧಿಯು ದಿನಾಂಕ 30.11.2025 ರಂದು ಕೊನೆಗೊಂಡಿರುವುದರಿಂದ ಸಿಂಡಿಕೇಟು ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರೀರ್ವರು ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದನ್ನು ಸ್ಮರಿಸುತ್ತಾ ಸದರಿಯವರಿಗೆ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

- **ಪ್ರಾರಂಭಿಕ:**

1. ಲೆಕ್ಕಪರಿಶೋಧನೆಯ ಅಕ್ಷೇಪಣೆಗಳಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದಲ್ಲಿ ಪ್ರಥಮ ಬಾರಿಗೆ ಅಡ್ ಹಾಕ್ ಸಮಿತಿಯ ಸಭೆಯನ್ನು ದಿನಾಂಕ 20.11.2025ರಂದು ನಡೆಸಿ ಸುಮಾರು ರೂ.2.00 ಕೋಟಿ ಮೊತ್ತದ ಆಕ್ಷೇಪಣೆಗಳಿಗೆ ಸೂಕ್ತ ದಾಖಲಾತಿಯನ್ನು ಸಲ್ಲಿಸುವ ಮೂಲಕ ತೀರುವಳಿ ಮಾಡಲಾಗಿದೆ ಎಂದು ಸಭೆಗೆ ತಿಳಿಸಲಾಯಿತು.

2. ವಿಶ್ವವಿದ್ಯಾನಿಲಯದ ವಾರ್ಷಿಕ ಘಟಿಕೋತ್ಸವ ನಡೆಸುವ ಬಗ್ಗೆ ಮಾನ್ಯ ಕುಲಾಧಿಪತಿಗಳು 2026ರ ಮಾರ್ಚ್ ತಿಂಗಳ ಮೊದಲನೇ ವಾರದಲ್ಲಿ ಹಮ್ಮಿಕೊಳ್ಳಲು ಸೂಚಿಸಿರುವುದಾಗಿ ಸಭೆಗೆ ತಿಳಿಸಲಾಯಿತು.

3. ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ. ಕೆ.ಸಿ. ಮಹದೇಶ ಇವರು ಸ್ಥಳೀಯ ಪರಿಶೀಲನಾ ಸಮಿತಿಗೆ ಸಿಂಡಿಕೇಟ್ ಸದಸ್ಯರನ್ನು ಅಧ್ಯಕ್ಷರನ್ನಾಗಿ ನೇಮಿಸುವಂತೆ ಒತ್ತಾಯಿಸಿದರು. ಸ್ಥಳೀಯ ಪರಿಶೀಲನಾ ಸಮಿತಿಯ ವರದಿಗಳನ್ನು ಸರ್ಕಾರಕ್ಕೆ Digital format ಮೂಲಕ ಮಾತ್ರ ಸಲ್ಲಿಸಲು ಸಾಧ್ಯವಿರುವುದರಿಂದ ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಪ್ರಾಧ್ಯಾಪಕರುಗಳಿಗೆ ಮಾತ್ರ UUCMS ಲಾಗ್-ಇನ್ ಐ.ಡಿ. ಲಭ್ಯವಿರುವುದರಿಂದ ಸಿಂಡಿಕೇಟ್ ಸದಸ್ಯರ ಅಧ್ಯಕ್ಷತೆಯಲ್ಲಿ ಸ್ಥಳೀಯ ಪರಿಶೀಲನಾ ಸಮಿತಿಯನ್ನು ರಚಿಸಲು ಅವಕಾಶ ಇಲ್ಲದಿರುವುದನ್ನು ಸಭೆಗೆ ತಿಳಿಸಲಾಯಿತು.

## I. ಅನುಸರಣಾ ವರದಿಯ ಅನುಮೋದನೆ

**ದಿನಾಂಕ 28.10.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ಏಳನೇ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.**

**ಕಾರ್ಯಸೂಚಿ ಸಂಖ್ಯೆ ಸಿಂಡಿಕೇಟು: ಸಾ.ಸ.7:5(2025)ಗೆ ಸಂಬಂಧಿಸಿದಂತೆ,**

ವಿಶ್ವವಿದ್ಯಾನಿಲಯವು ರೂಸಾ ಅನುದಾನವನ್ನು ಬೇರೆ ಉದ್ಧೇಶಗಳಿಗೆ ಬಳಸಿಕೊಂಡ ಬಗ್ಗೆ ವರದಿಯನ್ನು ನೀಡಲು ಸರ್ಕಾರವು ಸೂಚಿಸಿದ್ದು, ಈ ಕುರಿತಾದ ಗೌಪ್ಯ ವರದಿಯನ್ನು ಸರ್ಕಾರಕ್ಕೆ ಈಗಾಗಲೇ ಸಲ್ಲಿಸಲಾಗಿರುತ್ತದೆ. "ಸರ್ಕಾರವು ಇದರ ಬಗ್ಗೆ ಪರಿಶೀಲಿಸುತ್ತಿರುವುದರಿಂದ ಈ ಹಂತದಲ್ಲಿ ಸದರಿ ವಿಷಯದ ಬಗ್ಗೆ ಯಾವುದೇ ಮಾಹಿತಿಯನ್ನು ನೀಡಲು ಸಾಧ್ಯವಾಗುವುದಿಲ್ಲ" ವೆಂದು ಪರಿಷ್ಕೃತ ಅನುಸರಣಾ ವರದಿ ಹಣಕಾಸು ವಿಭಾಗದಿಂದ ನೀಡಿರುತ್ತಾರೆ.

**- ಉಳಿದಂತೆ ಅನುಮೋದಿಸಲಾಯಿತು –**

## II. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.8:1(2025) |
| ವಿಷಯ: | ಡಾ.ಕೆ.ಸಿ. ಮಹದೇಶ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 1 : | ಪ್ರಸ್ತುತ ಮಂಗಳೂರು ವಿಶ್ವವಿದ್ಯಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧ್ಯಾಪಕರು ಮತ್ತು ಅಧ್ಯಾಪಕೇತರ ಸಿಬ್ಬಂದಿಗಳ ಸಂಖ್ಯೆ ಮತ್ತು ಸರ್ಕಾರದ ಅನುದಾನದಿಂದ ಅವರಿಗೆ ನೀಡುತ್ತಿರುವ ಸಂಬಳದ ವಿವರಗಳು ಮತ್ತು ವಿಶ್ವವಿದ್ಯಾಲಯದ ಆಂತರಿಕ ಸಂಪನ್ಮೂಲಗಳಿಂದ ಸಂಬಳ ನೀಡುತ್ತಿರುವ ಸಿಬ್ಬಂದಿಗಳ, ಅಧ್ಯಾಪಕ/ ಅಧ್ಯಾಪಕೇತರರ ವಿವರಗಳನ್ನು ತಿಳಿಸುವುದು ಮತ್ತು ಚರ್ಚಿಸಿ ನಿರ್ಣಯಿಸುವುದು (ಕ್ರಮ ಸಂಖ್ಯೆ 1). |
| **ನಿರ್ಣಯ:** | ಚರ್ಚಿಸಲಾಯಿತು. ಹಿಂದಿನ ಸಾಲಿನಲ್ಲಿ ನಿವೃತ್ತಿಗೊಂಡು ನಿವೃತ್ತ ವೇತನ ಹಾಗೂ ನಿವೃತ್ತಿ ಉಪಧನವನ್ನು ನೀಡಲು ಭಾಗಶ: ಬಾಕಿ ಇರುವ ಪ್ರಾಧ್ಯಾಪಕರುಗಳಿಗೆ ದಿನಾಂಕ 31.12.2025ರೊಳಗೆ ಲಭ್ಯವಿರುವ ಮೊತ್ತದಲ್ಲಿ ಸಮಾನವಾಗಿ ಪಾವತಿಸಲು ನಿರ್ಣಯಿಸಲಾಯಿತು. |

ವಿಷಯ 2 : ವಿಶ್ವವಿದ್ಯಾನಿಲಯದ ಜೊತೆ ಪ್ರಸ್ತುತ ಇದುವರೆಗೆ ಒಡಂಬಡಿಕೆ ಮಾಡಿಕೊಂಡು ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಗಳ ಸಂಖ್ಯೆಗಳ ಮಾಹಿತಿ ನೀಡುವುದು ಮತ್ತು ಕಾರ್ಯ ನಿರ್ವಹಿಸದೆ ಇರುವ ಸಂಸ್ಥೆಗಳ ಮಾಹಿತಿ ಮತ್ತು ಅವುಗಳ ಮೂಲಕ ವಿಶ್ವವಿದ್ಯಾನಿಲಯಕ್ಕೆ ಆಗುತ್ತಿರುವ ಅನುಕೂಲ ಮತ್ತು ಪೂರಕ ಮಾಹಿತಿಯನ್ನು ನೀಡಿ ಚರ್ಚಿಸಿ ನಿರ್ಣಯಿಸುವುದು (ಕ್ರಮ ಸಂಖ್ಯೆ 3).

**ನಿರ್ಣಯ:** ನೀಡಿರುವ ಮಾಹಿತಿಯ ಬಗ್ಗೆ ವಿಸ್ಕೃತವಾಗಿ ಚರ್ಚಿಸಲಾಯಿತು. ಈ ಬಗ್ಗೆ ಮಾನ್ಯತೆ ನವೀಕರಣವಾಗದ ಕೇಂದ್ರಗಳಿದ್ದಲ್ಲಿ ಮಾಹಿತಿಯನ್ನು ಮಾನ್ಯ ಸದಸ್ಯರಿಗೆ ಒದಗಿಸಲು ನಿರ್ಣಯಿಸಲಾಯಿತು.

ವಿಷಯ 3 : ಮಂಗಳೂರು ವಿಶ್ವವಿದ್ಯಾನಿಲಯದ B.Ed./ M.Ed. ಕಾಲೇಜುಗಳ ಸಂಖ್ಯೆಗಳು ಮತ್ತು ಅವುಗಳ ಕಾರ್ಯನಿರ್ವಹಣೆ ಮತ್ತು ವಿಶ್ವವಿದ್ಯಾನಿಲಯದ ಎಲ್ಲಾ ವಿಭಾಗಗಳ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೋರ್ಸ್‌ಗಳಲ್ಲಿ ಪಿಹೆಚ್.ಡಿ. ಸಂಶೋಧನಾ ಕೇಂದ್ರಗಳನ್ನು ನೀಡಿರುವ ಸಂಪೂರ್ಣ ಮಾಹಿತಿಯನ್ನು ಮತ್ತು ಅವುಗಳ ಕಾರ್ಯನಿರ್ವಹಣೆ, ವಾರ್ಷಿಕ ನವೀಕರಣದ ಸಂಪೂರ್ಣ ಮಾಹಿತಿಗಳನ್ನು ನೀಡುವುದು ಮತ್ತು ಚರ್ಚಿಸಿ ನಿರ್ಣಯಿಸುವುದು. (ಕ್ರಮ ಸಂಖ್ಯೆ 4).

**ನಿರ್ಣಯ:** ಮಾಹಿತಿ ನೀಡಲಾಯಿತು. ಎಂ.ಎಡ್. ಕೋರ್ಸ್ ಬಲಪಡಿಸುವ ನಿಟ್ಟಿನಲ್ಲಿ ಮಾನ್ಯ ಸಿಂಡಿಕೇಟು ಸದಸ್ಯರಾದ ಪ್ರೊ. ಉದಯ ಕುಮಾರ್ ಬಿ. ಇವರ ಸಲಹೆಯನ್ನು ಲಿಖಿತವಾಗಿ ಪಡೆದುಕೊಂಡು ಮುಂದಿನ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.8:2(2025)

ವಿಷಯ: ಸಂಯೋಜಿತ ಕಾಲೇಜುಗಳ ಆಡಳಿತ ಮಂಡಳಿ / ಸಲಹಾ ಮಂಡಳಿಗೆ ವಿಶ್ವವಿದ್ಯಾನಿಲಯದ ಸದಸ್ಯರನ್ನು ನಾಮ ನಿರ್ದೇಶನಗೊಳಿಸುವ ಬಗ್ಗೆ.

**ನಿರ್ಣಯ:** ಸಲಹಾ ಸಮಿತಿಗೆ ಸದಸ್ಯರನ್ನು ನಾಮನಿರ್ದೇಶನ ಮಾಡುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.8:3(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಅಧೀನದಲ್ಲಿರುವ ಕೆಲವೊಂದು ಕಾಲೇಜುಗಳು ಸಂಯೋಜನೆಯನ್ನು ಮುಂದುವರಿಸದಿರುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.8:4(2025)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿನ ಸಂಯೋಜನಾ ಶುಲ್ಕ ನಿಗದಿಪಡಿಸುವ ಬಗ್ಗೆ - ಸಿಂಡಿಕೇಟ್ ಸಭೆಯ ಘಟನೋತ್ತರ ಅನುಮೋದನೆಗಾಗಿ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.8:5(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಮರುನಾಮಕರಣದ ಬಗ್ಗೆ.

**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯ ಎಂಬ ಹೆಸರನ್ನೇ ಮುಂದುವರಿಸುವಂತೆ ಸರ್ವ ಸದಸ್ಯರು ಒಕ್ಕೋರಲಿನಿಂದ ಸೂಚಿಸಿದ್ದರಿಂದ "**ಮಂಗಳೂರು ವಿಶ್ವವಿದ್ಯಾನಿಲಯ**" ಎಂಬ ಹೆಸರನ್ನೇ ಮುಂದುವರಿಸುವಂತೆ ಸರ್ಕಾರಕ್ಕೆ ಪತ್ರ ಬರೆಯಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.8:6(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಉದ್ಯೋಗಿಗಳ ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ ನಿಯಮಗಳು ಪರಿನಿಯಮಕ್ಕೆ ತಿದ್ದುಪಡಿ ಮಾಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.8:7(2025)

ವಿಷಯ: ಡಾ.ಎನ್. ಕರುಣಾಕರ, ಹಿರಿಯ ಪ್ರಾಧ್ಯಾಪಕರು ಹಾಗೂ ಸಂಯೋಜಕರು, Centre for Advanced Research in Environmental Radioactivity (CARER), ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ Ministry of Health, State of Kuwait ಇಲ್ಲಿ ನಡೆದ ಕಾರ್ಯಾಗಾರದಲ್ಲಿ ಭಾಗವಹಿಸಿರುವುದಕ್ಕೆ ಘಟನೋತ್ತರ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು. ಇನ್ನು ಮುಂದೆ ವಿಶ್ವವಿದ್ಯಾನಿಲಯದಲ್ಲಿ ಶೈಕ್ಷಣಿಕ / ಸಂಶೋಧನೆಗಳಲ್ಲಿ ವಿಶೇಷ ಸಾಧನೆ ಮಾಡಿದ ಶಿಕ್ಷಕರ, ಸಂಶೋಧನಾ ವಿದ್ಯಾರ್ಥಿಗಳ ಸಾಧನೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈ ಬಗ್ಗೆ ವಿಶ್ವವಿದ್ಯಾನಿಲಯದಿಂದ ಅಧಿಕೃತವಾಗಿ ಪತ್ರಿಕಾ ಪ್ರಕಟಣೆ ನೀಡುವಂತೆ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.8:8(2025)

ವಿಷಯ: ಶ್ರೀ ಎಂ.ಪಿ. ಉಮೇಶ್ಚಂದ್ರ ಇವರು ವಿಶ್ವವಿದ್ಯಾನಿಲಯದ ಅನುಮತಿ ಪಡೆಯದೇ ಪತ್ರಿಕಾಗೋಷ್ಠಿ ನಡೆಸಿರುವ ಬಗ್ಗೆ.

**ನಿರ್ಣಯ:** ಸದರಿಯವರು ನೀಡಿರುವ ಸಮಾಜಾಯಿಷಿಕೆ ಪತ್ರವನ್ನು ಪರಿಶೀಲಿಸಿ ಶಿಸ್ತು ಕ್ರಮ /ಎಚ್ಚರಿಕೆಯನ್ನು ನೀಡುವ ಅಧಿಕಾರವನ್ನು ಸಿಂಡಿಕೇಟು ಮಾನ್ಯ ಕುಲಪತಿಯವರಿಗೆ ನೀಡಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.8:9(2025)

ವಿಷಯ: ದಿವಂಗತ ಕೆ. ಸುಧಾಕರ್ ಇವರ ಕುಟುಂಬ ಪಿಂಚಣಿ ಸೌಲಭ್ಯ ಮಂಜೂರಾತಿ ಕುರಿತು.

**ನಿರ್ಣಯ:** ಕಾನೂನು ತಜ್ಞರು ನೀಡಿರುವ ಅಭಿಪ್ರಾಯದ ಆಧಾರದಲ್ಲಿ ಮಂಜೂರಾತಿ ನೀಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.8:10(2025)

ವಿಷಯ: ಸ್ನಾತಕೋತ್ತರ ಸಮಾಜ ಕಾರ್ಯ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.8:11(2025)

ವಿಷಯ: ಪದವಿ ಮಟ್ಟದ ಇಂಟೀರಿಯರ್ ಡಿಸೈನ್ ಮತ್ತು ಡೆಕೋರೇಶನ್ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.8:12(2025)

ವಿಷಯ: ಪದವಿ ಮಟ್ಟದ ತತ್ವಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.8:13(2025)

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಅಕ್ಟೋಬರ್ 2025ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** ಅವಗಾಹನಿಸಲಾಯಿತು. IQAC ಸಲಹಾ ಸಮಿತಿಯ ಸಭೆಯನ್ನು ಕೂಡಲೇ ನಿಗದಿಪಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.8:14(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆಡಳಿತ ಸೌಧ ಕಟ್ಟಡದಲ್ಲಿ ladies rest room ವ್ಯವಸ್ಥೆಗೊಳಿಸುವ ಕಾಮಗಾರಿ ಹಾಗೂ Front desk renovation ಕಾಮಗಾರಿ and providing and laying cement concrete paver to the quadrangle area of S.V.P. Kannada Department at Mangalore University Campus - ಪ್ಯಾಕೇಜ್ ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.8:15(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಉದ್ಯೋಗಸ್ಥ ಮಹಿಳಾ ವಸತಿನಿಲಯದ ಶೌಚಾಲಯ ಹಾಗೂ ಬಾಗಿಲುಗಳ ದುರಸ್ತಿ ಕಾಮಗಾರಿ ಮತ್ತು ಮಂಗಳೂರು ವಿಶ್ವವಿದ್ಯಾನಿಲಯ ಆಡಳಿತ ಸೌಧದ ನೆಲ ಅಂತಸ್ತು ಶೌಚಾಲಯಗಳ ದುರಸ್ತಿ ಕಾಮಗಾರಿ - ಪ್ಯಾಕೇಜ್ ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.8:16(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ನೇತ್ರಾವತಿ ಅತಿಥಿಗೃಹದ ಅಗತ್ಯದ ನಿರ್ವಹಣಾ ಕಾಮಗಾರಿಯ ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.8:17(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಪುರುಷರ ಭೋಜನಾಲಯ ಕಟ್ಟಡದಲ್ಲಿ ಹೊಸದಾಗಿ ಅಳವಡಿಸಬೇಕಾಗಿರುವ ಮುಖ್ಯ L.T 6x1.5x5 ಡಿಸ್ಟ್ರಿಬ್ಯೂಷನ್ ಪ್ಯಾನಲ್ ಬೋರ್ಡ್ ಮತ್ತು ಪ್ಯಾನಲ್ ಬೋರ್ಡ್‌ಗಳಿಗೆ ಹಾಗೂ ಪ್ಯಾನಲ್ ಬೋರ್ಡ್‌ನಿಂದ ಸದ್ರಿ ಕಟ್ಟಡಕ್ಕೆ ವಿದ್ಯುತ್ ಸರಬರಾಜು ಕಲ್ಪಿಸುವ 2 ಸಂಖ್ಯೆಯ UG Cable ನ್ನು ಬದಲಾಯಿಸಿ ಅಳವಡಿಸುವ ಕಾಮಗಾರಿ.

| | |
|---|---|
| | ಹಾಗೂ ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ವಿಜ್ಞಾನ ಸಂಕೀರ್ಣ ಕಟ್ಟಡದ ಎರಡನೇ ಅಂತಸ್ತಿನಲ್ಲಿರುವ ಕೈಗಾರಿಕ ರಸಾಯನಶಾಸ್ತ್ರ ವಿಭಾಗದ ಪ್ರಯೋಗಾಲಯದಲ್ಲಿ ಅಳವಡಿಸಲಾಗಿರುವ Fume hood ಯಂತ್ರಗಳಿಗೆ 3 Phase ವಿದ್ಯುತ್ ಸಂಪರ್ಕ ಕಲ್ಪಿಸುವ LT UG Cable ಹಾಳಾಗಿದ್ದರಿಂದ ಹೊಸ 50 sq mm 3 Phase L.T UG Cable ಒದಗಿಸಿ ಅಳವಡಿಸುವ ಬಗ್ಗೆ.<br>ಮತ್ತು ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಪುರುಷರ ವಸತಿನಿಲಯ ಕಟ್ಟಡದ ಹಿಂದುಗಡೆ ಸ್ಥಾಪಿಸಿರುವ 40 KLD STP ಸ್ಥಾವರಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು 25 Sqmm UG Cable ಒದಗಿಸಿ ಅಳವಡಿಸುವ ಕಾಮಗಾರಿ - ಪ್ಯಾಕೇಜ್ ಟೆಂಡರ್ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಇಡಿ:ಸಾ.ಸ.8:18(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯ ಮಂಗಳ ಅಡಿಟೋರಿಯಂ ಕಟ್ಟಡದ ಮೇಲ್ಭಾಗದಲ್ಲಿ ನೀರು ಸರಬರಾಜು ವ್ಯವಸ್ಥೆಗಾಗಿ 10,000 ಲೀ ಸಾಮರ್ಥ್ಯದ ಸಿಂಟೆಕ್ಸ್ ಟ್ಯಾಂಕ್‌ನ್ನು (2000 ಲೀಟರ್‌ನ 5 ಸಂಖ್ಯೆ) ಅಳವಡಿಸಿ ಅಗತ್ಯದ ನೀರಿನ ಒಳಹರಿವು, ಹೊರಹರಿವು ಮತ್ತು ಓವರ್ ಫ್ಲೋ ಕೊಳವೆಗಳೊಂದಿಗೆ ಅಳವಡಿಸುವುದು - ಟೆಂಡರ್ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಇಡಿ:ಸಾ.ಸ.8:19(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯ ಮಂಗಳ ಅಡಿಟೋರಿಯಂ ಕಟ್ಟಡಕ್ಕೆ ಹೆಚ್ಚುವರಿ ಪವರ್ ಪಾಯಿಂಟ್ ವೋಲ್ಟೇಜ್ ಸ್ಟೆಬಿಲೈಝರ್ ಇನ್ವರ್ಟರ್ ಹಾಗೂ ಹೊರಾಂಗಣಕ್ಕೆ ಎಲ್.ಇಡಿ. ದೀಪಗಳನ್ನು ಅಳವಡಿಸುವ ಕಾಮಗಾರಿ.<br>ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಮಾನ್ಯ ಕುಲಪತಿಯವರ ಬಂಗಲೆಯ ಆವರಣದಲ್ಲಿರುವ 1 ಸಂಖ್ಯೆಯ ಹೊಸ ವಿದ್ಯುತ್ ಫೀಡರ್ ಪಿಲ್ಲರ್ ಬಾಕ್ಸ್‌ನ್ನು ಅಳವಡಿಸುವ ಕಾಮಗಾರಿ - ಪ್ಯಾಕೇಜ್ ಟೆಂಡರ್ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.8:20(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದ ಸಿಬ್ಬಂದಿ ವಸತಿ ಗೃಹ ಇ ಮಾದರಿ ಕಟ್ಟಡ ಸಂಖ್ಯೆ 2 ರ ಹಿಂಭಾಗದಲ್ಲಿರುವ ಕೊಳಚೆ ನೀರಿನ ಡ್ರೈನನ್ನು ಯಕ್ಷಗಾನ ಕಲಾಕೇಂದ್ರದ ಹಿಂಭಾಗದ ಕಣಿವೆಯವರೆಗೆ ವಿಸ್ತರಿಸುವ ಕಾಮಗಾರಿ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.8:21(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಮುಖ್ಯ ಸರಬರಾಜು ವ್ಯವಸ್ಥೆಯ ಮುನ್ನೂರು ಪಂಪ್ ಸ್ಥಾವರದಲ್ಲಿನ 50 ಅಶ್ವಶಕ್ತಿ ಟರ್ಬೈನ್ ಪಂಪ್ ಸಂಖ್ಯೆ - 1 ರ ಅಗತ್ಯದ ದುರಸ್ತಿಯ ನಿರ್ವಹಣೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.8:22(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಜೇಷ್ಠತೆ ಮತ್ತು ಸರದಿಯ ಪ್ರಕಾರ ನೇಮಕ ಮಾಡಬೇಕಾದ ಪಟ್ಟಿಯನ್ನು ಅನುಮೋದಿಸಲಾಯಿತು. ಸಂಖ್ಯಾಶಾಸ್ತ್ರ ವಿಭಾಗದ ಅಧ್ಯಕ್ಷರ ಅಧಿಕಾರವನ್ನು ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನರಿಗೆ ನೀಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.8:23(2025)

ವಿಷಯ: ಡಾ.ಕೆ.ಸಿ. ಮಹದೇಶ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

ವಿಷಯ 1: 2019-20 ರಿಂದ 2020-21 ಮತ್ತು 2021-22 ಮತ್ತು 2022-23 ಮತ್ತು 2023-24ನೇ ಸಾಲಿನ ಲೆಕ್ಕ ಪರಿಶೋಧನ ಆಕ್ಷೇಪಣೆಗಳ ವರದಿಗಳನ್ನು ನೀಡುವುದು ಮತ್ತು ಚರ್ಚಿಸಿ ನಿರ್ಣಯಿಸುವುದು.

**ನಿರ್ಣಯ:** ಮಾನ್ಯ ಸದಸ್ಯರು ಕೋರಿರುವ ಮಾಹಿತಿಯನ್ನು ಒದಗಿಸಿದ್ದರೂ ಈ ಬಗ್ಗೆ ವಿವರವಾದ ಚರ್ಚೆಗೆ ಅವಕಾಶವಾಗಿಲ್ಲದ ಕಾರಣ ಮಾನ್ಯ ಸದಸ್ಯರನ್ನು ಹಣಕಾಸು ಅಧಿಕಾರಿಯವರು ಖುದ್ದಾಗಿ ಕಛೇರಿಗೆ ಆಹ್ವಾನಿಸಿ ಸದರಿಯವರು ಕೋರಿರುವ ವಿವರಗಳನ್ನು ನೀಡುವಂತೆ ನಿರ್ಣಯಿಸಲಾಯಿತು.

ವಿಷಯ 2: 2019-20 ರಿಂದ 2020-21 ಮತ್ತು 2021-22 ಮತ್ತು 2022-23 ಮತ್ತು 2023-24 ಮತ್ತು 2024-25 ಮತ್ತು 2025-26ನೇ ಸಾಲಿನವರೆಗಿನ ವಿಶ್ವವಿದ್ಯಾನಿಲಯದ ಮತ್ತು ಸಂಯೋಜಿತ ಕಾಲೇಜುಗಳ ಕ್ರೀಡಾ ಶುಲ್ಕವನ್ನು ಎಷ್ಟು ವಸೂಲಿ ಮಾಡಲಾಗಿದೆ? ಮತ್ತು ಈ ಸಂಬಂಧ ಕ್ರೀಡಾ ಬಾಬ್ತಿಗೆ ಮಾತ್ರ ಎಷ್ಟು ಹಣವನ್ನು (ಖರ್ಚು ಮಾಡಲಾಗಿದೆ) ಬಳಸಲಾಗಿದೆ? ವಿವರಗಳನ್ನು ತಿಳಿಸುವುದು ಮತ್ತು ಚರ್ಚಿಸಿ ನಿರ್ಣಯಿಸುವುದು.

**ನಿರ್ಣಯ:** ಮಾಹಿತಿ ನೀಡಲಾಯಿತು.

ವಿಷಯ 3: 2025 ಜನವರಿ 01 ರಿಂದ 2025 ನವೆಂಬರ್ 30ರವರೆಗೆ ವಿಶ್ವವಿದ್ಯಾನಿಲಯದ ಎಲ್ಲಾ ನೌಕರರ ಸಂಬಳಗಳನ್ನು ಹೊರತುಪಡಿಸಿ ಇತರೆ ವಿಚಾರಗಳಿಗೆ ನೀಡಲಾಗಿರುವ ಬಿಲ್ಲುಗಳು ಮತ್ತು ಇತರೆ ಹಣಕಾಸು ವಹಿವಾಟಿನ ಮಾಹಿತಿಯನ್ನು ನೀಡಲು ಕೋರಲಾಗಿದೆ ಮತ್ತು ಚರ್ಚಿಸಿ ನಿರ್ಣಯಿಸುವುದು.

**ನಿರ್ಣಯ:** ಮಾಹಿತಿ ನೀಡಲಾಯಿತು.

ವಿಷಯ 4: ಮಂಗಳೂರು ವಿಶ್ವವಿದ್ಯಾನಿಲಯದ ಇಂಜಿನಿಯರಿಂಗ್ ವಿಭಾಗದಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರ ಕೆಲಸ ಮಾಡುತ್ತಿರುವ ಮಾಹಿತಿಗಳನ್ನು ನೀಡಲು ಕೋರಿದೆ ಮತ್ತು ಚರ್ಚಿಸಿ ನಿರ್ಣಯಿಸುವುದು.

**ನಿರ್ಣಯ:** ಇಂಜಿನಿಯರಿಂಗ್ ವಿಭಾಗದ ನೌಕರರ ಕಾರ್ಯ ನಿರ್ವಹಣೆಯ ಬಗ್ಗೆ ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶರವರ ನೇತೃತ್ವದಲ್ಲಿ, ಇಬ್ಬರು ಪ್ರಾಧ್ಯಾಪಕರನ್ನು ಸದಸ್ಯರನ್ನಾಗಿ ಮಾಡಿ ವಿಭಾಗದ ಸಿಬ್ಬಂದಿಗಳ ದಕ್ಷತೆ ಹೆಚ್ಚಿಸುವ ನಿಟ್ಟಿನಲ್ಲಿ ಸಲಹೆ ನೀಡುವಂತೆ ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ:ಸಾ.ಸ.8:24(2025)

ವಿಷಯ: ಜೂನ್/ಜುಲೈ/ಆಗಸ್ಟ್ - 2025ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ / ಸ್ನಾತಕೋತ್ತರ ಪದವಿ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ನಡೆಸಿದ ಅವ್ಯವಹಾರಗಳ - ದಂಡನೆಯನ್ನು ದೃಢಪಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.8:25(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 44ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮದ ಬಗ್ಗೆ.

**ನಿರ್ಣಯ:** ಘಟಿಕೋತ್ಸವಕ್ಕೆ ರಾಷ್ಟ್ರೀಯ / ಅಂತರ ರಾಷ್ಟ್ರೀಯ ಮಟ್ಟದಲ್ಲಿ ಖ್ಯಾತರಾದ ವಿಜ್ಞಾನಿ / ಹೆಸರಾಂತ ಸಾಹಿತಿ/ ವೈದ್ಯಕೀಯ ತಜ್ಞ / ಸಶಸ್ತ್ರ ಪಡೆಯ ಮುಖ್ಯಸ್ಥರನ್ನು ಮುಖ್ಯ ಅತಿಥಿಯವರನ್ನಾಗಿ ಆಹ್ವಾನಿಸುವ ಬಗ್ಗೆ ನಿರ್ಣಯ ಕೈಗೊಳ್ಳಲು ಮಾನ್ಯ ಕುಲಪತಿಯವರಿಗೆ ಅಧಿಕಾರ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.8:26(2025)

ವಿಷಯ: ಆಳ್ವಾಸ್ ಕಾಲೇಜು, ಮೂಡಬಿದರೆ ಇಲ್ಲಿನ ರಸಾಯನಶಾಸ್ತ್ರ, ಸಸ್ಯಶಾಸ್ತ್ರ, ಸಮಾಜಕಾರ್ಯ, ಪತ್ರಿಕೋದ್ಯಮ, ಬಯೋಟೆಕ್ನಾಲಜಿ ಮತ್ತು ಫುಡ್ ಸೈನ್ಸ್ ಆಂಡ್ ನ್ಯೂಟ್ರಿಷಿಯನ್ ಸ್ನಾತಕೋತ್ತರ ವಿಭಾಗಗಳನ್ನು ಪಿಹೆಚ್.ಡಿ. ವ್ಯಾಸಂಗಕ್ಕೆ ಸಂಶೋಧನಾ ಕೇಂದ್ರವನ್ನಾಗಿ ಮಾನ್ಯತೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ:ಸಾ.ಸ.8:27(2025)

ವಿಷಯ: ಪಿಹೆಚ್.ಡಿ. ಪದವಿ ಪ್ರದಾನ ಮಾಡಿದ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.8:28(2025)

ವಿಷಯ: ಡಾ.ಜೆ.ಜಿ. ಮಂಜುನಾಥ, ಸಹಾಯಕ ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ, ಎಫ್.ಎಂ.ಕೆ.ಎಂ.ಸಿ. ಕಾಲೇಜು, ಮಡಿಕೇರಿ ಇವರನ್ನು Visiting Professor ಆಗಿ ಕರ್ತವ್ಯ ನಿರ್ವಹಿಸುವ ಸಲುವಾಗಿ Brazil ಇಲ್ಲಿಗೆ ಭೇಟಿ ನೀಡಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಸದರಿಯವರು ಕೊಡಗು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವುದರಿಂದ ಅನುಮತಿ ನೀಡುವ ಪ್ರಮೇಯ ಒದಗಿಬರುವುದಿಲ್ಲವೆಂದು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.8:29(2025)

ವಿಷಯ: ದಿವಂಗತ ಎಸ್.ಆನಂದ್ ಇವರ ಕುಟುಂಬ ಪಿಂಚಣಿ ಸೌಲಭ್ಯ ಮಂಜೂರಾತಿ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ:ಸಾ.ಸ.8:30(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಅಧಿಕಾರಿ ಸಿಬ್ಬಂದಿಗಳಿಗೆ ಕಚೇರಿ ಕಾರ್ಯನಿಮಿತ್ತ ಬೆಂಗಳೂರಿಗೆ ತೆರಳಿದಾಗ ವಾಸ್ತವ್ಯ ಹೂಡಲು ಪಡೆದುಕೊಂಡಿದ್ದ ಅತಿಥಿಗೃಹಕ್ಕೆ ಸಂಬಂಧಿಸಿ ವಿಶ್ವವಿದ್ಯಾನಿಲಯದಿಂದ ನ್ಯಾಯಾಲಯದಲ್ಲಿ ದಾಖಲಿಸಲಾದ ಪ್ರಕರಣ ಸಂಖ್ಯೆ: 711/2021ನ್ನು ಮುಕ್ತಾಯಗೊಳಿಸುವ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.8:31(2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯಕ್ಕೆ ನಿರ್ದೇಶಕರನ್ನು ನೇಮಕ ಮಾಡುವ ಬಗ್ಗೆ.

**ನಿರ್ಣಯ:** ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.8:32(2025)

ವಿಷಯ: ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್ ಮೆಂಟ್ ಸ್ಕೀಂ ನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗ/ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ - ಆಯ್ಕೆ ಸಮಿತಿ/ಸ್ಕ್ರೀನಿಂಗ್ ಕಂ ಇವ್ಯಾಲ್ಯೂವೇಶನ್ ಸಮಿತಿ ಸಭೆಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಇತರೆ ವಿಷಯಗಳು:**

1) ದಿನಾಂಕ 24.12.2025ರಂದು ವಿಶೇಷ ಸಿಂಡಿಕೇಟು ಸಭೆ ನಡೆಸಲು ನಿರ್ಣಯಿಸಲಾಯಿತು.

2) ಡಾ. ಪಿ. ದಯಾನಂದ ಪೈ- ಪಿ. ಸತೀಶ್ ಪೈ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರಥಬೀಧಿ, ಮಂಗಳೂರು ಇಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ಎಂ.ಎ. ತುಳು ಕೋರ್ಸನ್ನು ಪ್ರಾರಂಭಿಸುವ ಬಗ್ಗೆ ವಿಧಾನ ಸಭಾಧ್ಯಕ್ಷರು ಉನ್ನತ ಶಿಕ್ಷಣ ಇಲಾಖೆಗೆ ಸೂಚಿಸಿದ್ದು, ಇದಕ್ಕೆ ಸಂಬಂಧಿಸಿದ ಸಿಲೆಬಸ್ ಇತ್ಯಾದಿಗಳೊಂದಿಗೆ ಪೂರ್ಣ ಸಹಕಾರವನ್ನು ವಿಶ್ವವಿದ್ಯಾನಿಲಯದ ವತಿಯಿಂದ ನೀಡಲಾಗುವುದು. ಅಲ್ಲದೇ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿಯೂ ತುಳು ಭಾಷೆಯ ಎಂ.ಎ. ಕೋರ್ಸ್ ನ್ನು ದೂರಶಿಕ್ಷಣದ ಮೂಲಕ ಪ್ರಾರಂಭಿಸುವ ಬಗ್ಗೆ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿಯವರೊಂದಿಗೂ ಚರ್ಚಿಸಲಾಗುವುದು ಎಂದು ಸಭೆಗೆ ತಿಳಿಸಲಾಯಿತು.

3) ವಿಶ್ವವಿದ್ಯಾನಿಲಯದ ನಿವೃತ್ತ ನೌಕರರಿಗೆ ಪಿಂಚಣಿಯನ್ನು ಸುಗಮವಾಗಿ ನೀಡುವ ನಿಟ್ಟಿನಲ್ಲಿ **"ಪೆನ್ಷನ್ ಫಂಡ್ ಟ್ರಸ್ಟ್"** ಸ್ಥಾಪಿಸಲಾಗುವುದು ಎಂದು ಸಭೆಗೆ ತಿಳಿಸಲಾಯಿತು.

4) ತುಳು ವಿಷಯದಲ್ಲಿ ಪಿಹೆಚ್.ಡಿ. ಸಂಶೋಧನೆ ನಡೆಸುವ ನಿಟ್ಟಿನಲ್ಲಿ ನೀತಿ ನಿಯಮ ರೂಪಿಸಲು ಪ್ರೊ. ಕೆ. ಚಿನ್ನಪ್ಪ ಗೌಡ, ನೇತೃತ್ವದಲ್ಲಿ ಡಾ. ನರೇಂದ್ರ ರೈ ದೇರ್ಲ, ಮುಂತಾದ ತುಳು ವಿದ್ವಾಂಸರುಗಳನ್ನೊಳಗೊಂಡ ಪರಿಣಿತರ ಸಮಿತಿ ರಚಿಸಿ ನಿರ್ಣಯ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಲಾಯಿತು. ಸದರಿ ಸಮಿತಿಗೆ ಕರ್ನಾಟಕ ತುಳು ಅಕಾಡೆಮಿಯ ಸಹಕಾರವನ್ನು ಪಡೆಯುವಂತೆ ಮಾನ್ಯ ಸಿಂಡಿಕೇಟ್ ಸದಸ್ಯರಾದ ಶ್ರೀ ರಘುರಾಜ್ ರವರು ನೀಡಿದ ಸಲಹೆಯನ್ನು ಒಪ್ಪಲಾಯಿತು.

**ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಯವರು** |